**Akashvani : Bangalore**
**National Bulletin In Kannada**
**27.07.2024 / 19.35 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**27.07.2024 / 19.35 hrs**

**<><*<><>*><>**

ಮುಖ್ಯಾಂಶಗಳು

**೧. ೨೦೪೭ ರ ವೇಳೆಗೆ ವಿಕಸಿತ ಭಾರತ ಪ್ರತಿಯೊಬ್ಬ ಭಾರತೀಯರ ಗುರಿ - ಪ್ರಧಾನಮಂತ್ರಿ ನರೇಂದ್ರ ಮೋದಿ**

**೨. ಜಾಗತಿಕ ಸಹಕಾರದಿಂದ ಮಾತ್ರ ಜಾಗತಿಕ ಒಳಿತು ಸಾಧ್ಯ - ಸಚಿವ ಡಾ.ಎಸ್.ಜೈಶಂಕರ್**

**೩. ಮನ್ ಕಿ ಬಾತ್ : ನಾಳೆ ೧೧೨ ನೇ ಆವೃತ್ತಿಯಲ್ಲಿ ಪ್ರಧಾನಿ ಮನದ ಮಾತು**

**೪. ಪ್ಯಾರಿಸ್ ಒಲಿಂಪಿಕ್ಸ್ : ಮಹಿಳೆಯರ ಶೂಟಿಂಗ್ ಸ್ಪರ್ಧೆಯಲ್ಲಿ ಭಾರತದ ಮನು ಬಾಖೇರ್ ಫೈನಲ್‌ಗೆ ಅರ್ಹತೆ**

**<><*<><>*><>**

೨೦೪೭ ರ ವೇಳೆಗೆ ವಿಕಸಿತ ಭಾರತ ಪ್ರತಿಯೊಬ್ಬ ಭಾರತೀಯರ ಗುರಿಯಾಗಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ. ನೀತಿ ಆಯೋಗದ ಆಡಳಿತ ಮಂಡಳಿಯ ೯ನೇ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಈ ಗುರಿ ಸಾಧಿಸಲು ರಾಜ್ಯಗಳು ಸಕ್ರಿಯ ಪಾತ್ರ ನಿರ್ವಹಿಸಬಹುದಾಗಿದೆ ಎಂದರು. ಇದು ಪರಿವರ್ತನೆ, ತಂತ್ರಜ್ಞಾನ, ಭೌಗೋಳಿಕ-ರಾಜಕೀಯ ಮತ್ತು ಅವಕಾಶಗಳ ಕಾಲಘಟ್ಟವಾಗಿದೆ. ಈ ಅವಕಾಶಗಳನ್ನು ಭಾರತೀಯರು ಸದುಪಯೋಗಪಡಿಸಿಕೊಂಡು ಅಂತಾರಾಷ್ಟ್ರೀಯ ಹೂಡಿಕೆಗಳಿಗೆ ಅನುಕೂಲವಾಗುವಂತೆ ನೀತಿಗಳನ್ನು ರೂಪಿಸಬೇಕು ಎಂದು

ಕಿವಿಮಾತು ಹೇಳಿದರು. ಇದು ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವಾಗಿಸುವತ್ತ ಮಹತ್ವದ ಹೆಜ್ಜೆಯಾಗಿದೆ. ದೇಶವು ಸರಿಯಾದ ದಿಕ್ಕಿನಲ್ಲಿ ಸಾಗುತ್ತಿದ್ದು, ನೂರು ವರ್ಷಗಳಿಗೊಮ್ಮೆ ಸಂಕಷ್ಟ ತಂದೊಡ್ಡುವ ಸಾಂಕ್ರಾಮಿಕವನ್ನು ಹತ್ತಿಕ್ಕಿದೆ. ದೇಶವಾಸಿಗಳು ಅತ್ಯುತ್ಸಾಹ ಮತ್ತು ವಿಶ್ವಾಸದಿಂದಿದ್ದು, ಎಲ್ಲಾ ರಾಜ್ಯಗಳ ಸಂಘಟಿತ ಪ್ರಯತ್ನಗಳ ಮೂಲಕ ೨೦೪೭ ಕ್ಕೆ ವಿಕಸಿತ ಭಾರತ ಗುರಿಯನ್ನು ಸಾಕಾರಗೊಳಿಸಬಹುದಾಗಿದೆ ಎಂದು ಅಭಿಪ್ರಾಯಪಟ್ಟರು. ಭಾರತವು ಯುವಸಮೂಹದ ರಾಷ್ಟ್ರವಾಗಿದ್ದು, ಇಲ್ಲಿನ ಕಾರ್ಯಪಡೆಗೆ ವಿಶ್ವದೆಲ್ಲೆಡೆ ಅವಕಾಶವಿದೆ. ಯುವಕರನ್ನು ಕೌಶಲ್ಯಯುತರನ್ನಾಗಿಸಬೇಕಾದ ಗುರಿಯೊಂದಿಗೆ ಕೌಶಲ್ಯ, ಸಂಶೋಧನೆ ಮತ್ತು ಜ್ಞಾನಾಧಾರಿತ ಉದ್ಯೋಗಕ್ಕೆ ಆದ್ಯತೆ ನೀಡಲಾಗಿದೆ ಎಂದು ಹೇಳಿದರು. ನೀತಿ ಆಯೋಗದ ಅಧ್ಯಕ್ಷರೂ ಆಗಿರುವ ಪ್ರಧಾನಮಂತ್ರಿಗಳು, ರಾಷ್ಟ್ರಪತಿ ಭವನದ ಸಾಂಸ್ಕೃತಿಕ ಕೇಂದ್ರದಲ್ಲಿ ನಡೆದ ಆಡಳಿತ ಮಂಡಳಿಯ ಸಭೆಯ ಅಧ್ಯಕ್ಷತೆ ವಹಿಸಿದ್ದರು. ವಿವಿಧ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಮುಖ್ಯಮಂತ್ರಿಗಳು, ಲೆಫ್ಟಿನೆಂಟ್ ಗವರ್ನರ್‌ಗಳು, ಕೇಂದ್ರ ಸಚಿವರುಗಳು, ನೀತಿ ಆಯೋಗದ ಸದಸ್ಯರು ಸಭೆಯಲ್ಲಿ ಪಾಲ್ಗೊಂಡಿದ್ದರು. ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವಾಗಿಸುವ ಗುರಿಯೊಂದಿಗೆ ೨೦೪೭ ಕ್ಕೆ ವಿಕಸಿತ ಭಾರತ ಎಂಬುದು ಈ ವರ್ಷದ ಸಭೆಯ ಧ್ಯೇಯವಾಕ್ಯವಾಗಿದೆ. ಸರ್ಕಾರದ ಯೋಜನೆಗಳ ಪರಿಣಾಮಕಾರಿ ಅನುಷ್ಠಾನದ ಮೂಲಕ ಗ್ರಾಮೀಣ ಮತ್ತು ನಗರಗಳೆರಡ ಜನರ ಜೀವನಗುಣಮಟ್ಟವನ್ನು ಸುಧಾರಿಸುವುದು, ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ನಡುವೆ ಸಹಕಾರ ಮತ್ತು ಪಾಲ್ಗೊಳ್ಳುವಿಕೆ ಒಳಗೊಂಡ ಆಡಳಿತಕ್ಕೆ ಉತ್ತೇಜನ ನೀಡುವ ಬಗ್ಗೆ ಸಭೆಯಲ್ಲಿ ಪ್ರಮುಖವಾಗಿ ಚರ್ಚಿಸಲಾಯಿತು. ದೇಶದ ಒಟ್ಟು ದೇಶೀಯ ಉತ್ಪನ್ನ ಜಿಡಿಪಿಯು ಐದು ಲಕ್ಷ ಕೋಟಿ ಡಾಲರ್ ಮೀರುವುದರೊಂದಿಗೆ ವಿಶ್ವದ ಮೂರನೇ ಅತಿದೊಡ್ಡ ಆರ್ಥಿಕ ರಾಷ್ಟ್ರವಾಗುವತ್ತ ಭಾರತ ಸಾಗಿದೆ ಎಂದು ನೀತಿ ಆಯೋಗ ಹೇಳಿದೆ. ಕಳೆದ ವರ್ಷದ ಡಿಸೆಂಬರ್‌ನಲ್ಲಿ ನಡೆದ ಮುಖ್ಯ ಕಾರ್ಯದರ್ಶಿಗಳ

ಮೂರನೇ ರಾಷ್ಟ್ರೀಯ ಸಮಾವೇಶ ನೀಡಿದ ಶಿಫಾರಸ್ಸಿನ ಬಗ್ಗೆ ನೀತಿ ಆಯೋಗದ ಆಡಳಿತ ಮಂಡಳಿ ಗಮನಹರಿಸಿದೆ.

**<><*<><>*><>**

ಜಾಗತಿಕ ಸಹಕಾರದಿಂದ ಮಾತ್ರ ಜಾಗತಿಕ ಸಾಮಾನ್ಯ ಅಗತ್ಯಗಳು ಸುಭದ್ರವಾಗಿದ್ದು ಜಾಗತಿಕ ಒಳಿತುಗಳು ಸಾಧ್ಯವಾಗಲಿದೆ ಎಂದು ವಿದೇಶಾಂಗ ವ್ಯವಹಾರಗಳ ಖಾತೆ ಸಚಿವ ಡಾ.ಎಸ್.ಜೈಶಂಕರ್ ಹೇಳಿದ್ದಾರೆ.ಲಾವೋ ಪೀಪಲ್ಸ್ ಡೆಮಾಕ್ರೆಟಿಕ್ ರಿಪಬ್ಲಿಕ್‌ನ ವಿಯೆಂಟಿಯಾನ್‌ನಲ್ಲಿ ನಡೆದ ೩೧ನೇ ಆಸಿಯಾನ್ ಪ್ರಾದೇಶಿಕ ವೇದಿಕೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಹೊಸ ತಂತ್ರಜ್ಞಾನಗಳ ಬಳಕೆಯಾಗಲೀ, ಜಾಗತಿಕ ಪರಸ್ಪರ ಅವಲಂಬನೆಯಾಗಲೀ ಅನುಚಿತವಾಗಿರಬಾರದು ಎಂದರು. ಎಲ್ಲ ವಿಧಗಳ ಭಯೋತ್ಪಾದನೆ ನಿಗ್ರಹಕ್ಕೆ ಮತ್ತು ಸೈಬರ್ ಅಪರಾಧ ನಿಗ್ರಹಿಸುವಲ್ಲಿ ಇನ್ನಷ್ಟು ಸದೃಢರಾಗಬೇಕಿದೆ. ಕೋವಿಡ್, ಸಂಘರ್ಷ ಮತ್ತು ಹವಾಮಾನ ಬದಲಾವಣೆಗಳು ಪ್ರಸ್ತುತದ ಸಂಕಷ್ಟಗಳಾಗಿವೆ ಎಂದು ಹೇಳಿದ ಸಚಿವರು, ಆರ್ಥಿಕ, ರಾಜಕೀಯ, ತಾಂತ್ರಿಕ ಮತ್ತು ಸಂಪರ್ಕ ಸಹಕಾರದಿಂದ ಮಾತ್ರ ಇವುಗಳಿಗೆ ಪರಿಹಾರಗಳನ್ನು ಕಂಡುಕೊಳ್ಳಬಹುದು ಎಂದು ಅಭಿಪ್ರಾಯಪಟ್ಟರು. ಭಾರತದ ಇಂಡೋ- ಪೆಸಿಫಿಕ್ ಸಾಗರ ಉಪಕ್ರಮ ಮತ್ತು ಇಂಡೋ-ಪೆಸಿಫಿಕ್ ಕುರಿತ ಆಸಿಯಾನ್ ನೋಟ, ಎರಡೂ ಒಟ್ಟಾಗಿ ಕಾರ್ಯ ನಿರ್ವಹಿಸಿದ್ದಲ್ಲಿ ಕಾಣಬಹುದಾದ ಫಲಿತಾಂಶಗಳ ಬಗ್ಗೆ ಅವರು ಗಮನ ಸೆಳೆದರು. ಅಂತಾರಾಷ್ಟ್ರೀಯ ಕಾನೂನಿನನ್ವಯ ಅದರಲ್ಲೂ ವಿಶ್ವಸಂಸ್ಥೆ ಸಾಗರ ಕಡಲ ಸುರಕ್ಷತೆ ಮತ್ತು ಭದ್ರತೆ, ಸಂಚಾರ ಸ್ವಾತಂತ್ರ್ಯ, ಆಯಾ ಪ್ರದೇಶಗಳ ವ್ಯಾಜ್ಯಗಳ ಶಾಂತಿಯುತ ಪರಿಹಾರದ ಪ್ರಾಮುಖ್ಯತೆಯನ್ನು ಭಾರತ ಗುರುತಿಸುತ್ತದೆ ಎಂದು ಸಚಿವರು ಹೇಳಿದರು. ಆಸಿಯಾನ್ ಪ್ರಾದೇಶಿಕ ವೇದಿಕೆ ಚಟುವಟಿಕೆಗಳಿಗೆ ಭಾರತ ಕೊಡುಗೆ ನೀಡುವುದನ್ನು ಮುಂದುವರಿಸಲು ಬದ್ಧ ಎಂದು ಜೈಶಂಕರ್ ಹೇಳಿದರು.

**<><*<><>*><>**

ಬಿಜೆಪಿ ಆಡಳಿತವಿರುವ ರಾಜ್ಯಗಳ ಮುಖ್ಯಮಂತ್ರಿಗಳೊಂದಿಗೆ ನವದೆಹಲಿಯಲ್ಲಿಂದು ಪ್ರಧಾನಮಂತ್ರಿ ನರೇಂದ್ರ ಮೋದಿ, ಸಭೆ ನಡೆಸಿದ್ದಾರೆ. ಕೇಂದ್ರ ಸಚಿವ ಮತ್ತು ಬಿಜೆಪಿ ಮುಖ್ಯಸ್ಥ ಜೆ.ಪಿ.ನಡ್ಡಾ, ಕೇಂದ್ರ ಗೃಹ ಸಚಿವ ಅಮಿತ್ ಶಾ, ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಮತ್ತಿತರ ಹಿರಿಯ ಬಿಜೆಪಿ ನಾಯಕರು ಸಭೆಯಲ್ಲಿ ಪಾಲ್ಗೊಂಡಿದ್ದಾರೆ. ಸರ್ಕಾರಿ ಯೋಜನೆಗಳ ಪರಿಣಾಮಕಾರಿ ಅನುಷ್ಠಾನ, ರಾಜ್ಯಗಳ ಪ್ರತ್ರಿಕ್ರಿಯೆ ಬಗ್ಗೆ ಸಭೆಯಲ್ಲಿ ಚರ್ಚೆ ನಡೆಯುತ್ತಿರುವ ಸಾಧ್ಯತೆಯಿದೆ.

**<><*<><>*><>**

ಎಲ್ಲಾ ಕ್ಷೇತ್ರಗಳಲ್ಲಿ ಗರಿಷ್ಠ ಉತ್ಪಾದನೆ ಮತ್ತು ಸ್ಥಿರತೆಗಾಗಿ ಸಾರ್ವಜನಿಕ ಹಾಗೂ ಖಾಸಗಿ ಸಹಭಾಗಿತ್ವಕ್ಕೆ ಸರ್ಕಾರ ಉತ್ಸುಕವಾಗಿದೆ ಎಂದು ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ರಾಜ್ಯ ಸಚಿವ ಡಾ.ಜಿತೇಂದ್ರ ಸಿಂಗ್ ಹೇಳಿದ್ದಾರೆ. ಚೆನ್ನೈನಲ್ಲಿಂದು ನಡೆದ ಮಧುಮೇಹ ಕುರಿತ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ದೇಶದಲ್ಲಿ ಸಾಂಕ್ರಾಮಿಕವಲ್ಲದ ಕಾಯಿಲೆಗಳಿಂದ ಬಳಲುತ್ತಿರುವವರ ಸಂಖ್ಯೆ ಹೆಚ್ಚುತ್ತಿದ್ದು, ಆಧುನಿಕ ಕಾಯಿಲೆಗಳ ಚಿಕಿತ್ಸೆಗೆ ಸಮರ್ಥ ಸಂಶೋಧನೆಯ ಅಗತ್ಯವಿದೆ ಎಂದರು. ಭಾರತ, ವಿವಿಧ ಕ್ಷೇತ್ರಗಳಲ್ಲಿ ಅನೇಕ ಅಭಿವೃದ್ಧಿ ಹೊಂದಿದ ದೇಶಗಳಿಗಿಂತ ಮುಂದಿದೆ ಎಂದು ತಿಳಿಸಿದ ಅವರು, ಖಾಸಗಿ ಹೂಡಿಕೆಗಳಿಂದಾಗಿ ಬಾಹ್ಯಾಕಾಶ ಕ್ಷೇತ್ರ ಗಮನಾರ್ಹವಾಗಿ ಪ್ರಗತಿ ಹೊಂದಲು ಸಾಧ್ಯವಾಯಿತು. ವೈದ್ಯಕೀಯ ಕ್ಷೇತ್ರದಲ್ಲಿ ಆವಿಷ್ಕಾರಗಳು, ಸಂಶೋಧನೆ ಮತ್ತು ಅಭಿವೃದ್ಧಿಯತ್ತ ಸಂಬಂಧಪಟ್ಟವರು ಗಮನಹರಿಸುವಂತೆ ಸಚಿವರು ಕರೆ ನೀಡಿದರು.

**<><*<><>*><>**

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಆಕಾಶವಾಣಿಯ ಮಾಸಿಕ ಮನ್ ಕಿ ಬಾತ್ ಕಾರ್ಯಕ್ರಮ ನಾಳೆ ಬೆಳಗ್ಗೆ ೧೧ ಗಂಟೆಗೆ ಪ್ರಸಾರವಾಗಲಿದೆ. ದೇಶ ಮತ್ತು ವಿದೇಶಗಳಲ್ಲಿನ ಭಾರತೀಯರನ್ನು ಉದ್ದೇಶಿಸಿ ಅವರು ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಮನದ ಮಾತು ಕಾರ್ಯಕ್ರಮದ ೧೧೨ನೇ

ಆವೃತ್ತಿಯಾಗಿದೆ. ಮೂರನೇ ಬಾರಿಗೆ ಪ್ರಧಾನಿಯಾಗಿ ಅಧಿಕಾರ ವಹಿಸಿಕೊಂಡ ನಂತರ ನರೇಂದ್ರ ಮೋದಿ ಅವರ ಎರಡನೇ ಕಾರ್ಯಕ್ರಮ ಇದಾಗಿದೆ. ಆಕಾಶವಾಣಿ ಹಾಗೂ ದೂರದರ್ಶನದ ಎಲ್ಲ ತರಂಗಾಂತರಗಳಲ್ಲಿ ಈ ಕಾರ್ಯಕ್ರಮ ಬಿತ್ತರವಾಗಲಿದೆ. ಯೂಟ್ಯೂಬ್, ಸಾಮಾಜಿಕ ಜಾಲತಾಣಗಳಲ್ಲೂ ಈ ಕಾರ್ಯಕ್ರಮವನ್ನು ಆಲಿಸಬಹುದು.

**<><*<><>*><>**

ಸುಪ್ರೀಂಕೋರ್ಟ್‌ನಲ್ಲಿ ಇದೇ ಸೋಮವಾರದಿಂದ ಶನಿವಾರದವರೆಗೆ ನಡೆಯಲಿರುವ ವಿಶೇಷ ಲೋಕ್ ಅದಾಲತ್‌ನಲ್ಲಿ ಜನರು ಪಾಲ್ಗೊಳ್ಳುವಂತೆ ನ್ಯಾಯಮೂರ್ತಿ ಸೂರ್ಯಕಾಂತ್ ಕರೆ ನೀಡಿದ್ದಾರೆ. ಆಕಾಶವಾಣಿಗೆ ನೀಡಿದ ವಿಶೇಷ ಸಂದರ್ಶನದಲ್ಲಿ ಅವರು, ವೈವಾಹಿಕ ಪ್ರಕರಣಗಳು, ಭೂಮಿ ಸಂಬಂಧಿತ ವ್ಯಾಜ್ಯಗಳು, ಮೋಟಾರ್ ವಾಹನ ಅಪಘಾತ ಕ್ಲೇಮುಗಳು, ಭೂಸ್ವಾಧೀನ ಪರಿಹಾರ ಮೊದಲಾದ ವಿಷಯಗಳ ಪ್ರಕರಣಗಳ ಇತ್ಯರ್ಥಕ್ಕೆ ಜನರು, ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಮನವಿ ಮಾಡಿದರು. ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ಕೂಡ ಅದಾಲತ್‌ನಲ್ಲಿ ಪಾಲ್ಗೊಳ್ಳಬಹುದು ಎಂದು ಅವರು ಮಾಹಿತಿ ನೀಡಿದರು.

**<><*<><>*><>**

ವಲಸೆ ಬಂದ ಮತ್ತು ಗಾಯಗೊಂಡ ಪ್ಯಾಲಿಸ್ತೇನಿಯರು ಆಶ್ರಯ ಪಡೆದಿದ್ದ ಗಾಜಾದ ಶಾಲೆಯೊಂದರ ಮೇಲೆ ಇಸ್ರೇಲ್ ದಾಳಿಯಿಂದಾಗಿ ಕನಿಷ್ಠ ೩೦ ಪ್ಯಾಲಿಸ್ತೇನಿಯರು ಸಾವನ್ನಪ್ಪಿದ್ದು ೧೦೦ ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ. ಹಮಾಸ್ ನಿಯಂತ್ರಣ ಕೇಂದ್ರವನ್ನು ಗುರಿಯಾಗಿಸಿ ದಾಳಿಸಿ ನಡೆಸಲಾಯಿತು ಎಂದು ಇಸ್ರೇಲ್ ಸೇನೆ ಹೇಳಿದೆ. ಇಸ್ರೇಲ್ ಪಡೆಗಳ ವಿರುದ್ಧ ದಾಳಿ ನಡೆಸಲು ಈ ಶಾಲೆಯಲ್ಲಿ ಸಿದ್ಧತೆ ಮಾಡಲಾಗಿತ್ತು ಎಂದು ಇಸ್ರೇಲ್ ಹೇಳಿದೆ.

**<><*<><>*><>**

ಪ್ಯಾರಿಸ್ ಒಲಿಂಪಿಕ್ ಕ್ರೀಡಾಕೂಟಕ್ಕೆ ಗುಡುಗು ಮಳೆಯ ನಡುವೆಯೂ ಕಳೆದ ರಾತ್ರಿ ಚಾಲನೆ ದೊರೆತಿದ್ದು, ಇಂದಿನಿಂದ ಸ್ಪರ್ಧೆಗಳು ಆರಂಭವಾಗಿವೆ. ಬ್ಯಾಡ್ಮಿಂಟನ್, ಹಾಕಿ ಸೇರಿದಂತೆ ಏಳು ಪಂದ್ಯಗಳಲ್ಲಿ ಮೊದಲ ದಿನವಾದ ಇಂದು ಭಾರತ, ತನ್ನ ಆಟ ಆರಂಭಿಸಿದೆ. ಪುರುಷರ ಸಿಂಗಲ್ಸ್ ಸ್ಕಲ್ಸ್ ಹೀಟ್ಸ್‌ನಲ್ಲಿ ಬಾಲ್‌ರಾಜ್ ಪವಾರ್ ನಾಲ್ಕನೇ ಸ್ಥಾನ ಪಡೆದಿದ್ದು, ನಾಳೆ ನಡೆಯಲಿರುವ ಕ್ವಾರ್ಟರ್ ಫೈನಲ್ಸ್ ಹಂತದ ಅರ್ಹತಾ ಸುತ್ತಿನಲ್ಲಿ ಪಾಲ್ಗೊಳ್ಳಲಿದ್ದಾರೆ. ಪುರುಷರ ಡಬಲ್ಸ್‌ನಲ್ಲಿ ಸಾತ್ವಿಕ್ ಸಾಯಿರಾಜ್ ರಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಜೋಡಿ, ರಾತ್ರಿ ೮ ಗಂಟೆಗೆ ಆರಂಭವಾಗಲಿರುವ ಪಂದ್ಯದಲ್ಲಿ ಫ್ರಾನ್ಸ್ ಜೋಡಿಯೊಂದಿಗೆ ಮುಖಾಮುಖಿಯಾಗಲಿವೆ. ಮಹಿಳೆಯರ ಡಬಲ್ಸ್‌ನಲ್ಲಿ ಅಶ್ವಿನಿ ಪೊನ್ನಪ್ಪ ಮತ್ತು ತನಿಶಾ ಕ್ರಸ್ಟೊ ಜೋಡಿ, ರಾತ್ರಿ ೧೧.೫೦ ಕ್ಕೆ ಆರಂಭವಾಗಲಿರುವ ಮೊದಲ ಗುಂಪು ಪಂದ್ಯದಲ್ಲಿ ಕೊರಿಯನ್ ಜೋಡಿ ಎದುರು ಸೆಣಸಲಿದೆ. ಮಹಿಳೆಯರ ೧೦ ಮೀಟರ್ ಏರ್ ಪಿಸ್ತೂಲ್ ಸ್ಪರ್ಧೆಯಲ್ಲಿ ೫೮೦ ಅಂಕಗಳೊಂದಿಗೆ ಭಾರತದ ಮನು ಭಾಕೇರ್ ಫೈನಲ್ ಗೆ ಸ್ಥಾನ ಪಡೆದಿದ್ದಾರೆ. ಅವರ ಸಹ ಸ್ಪರ್ಧಿ ರಿದಮ್ ಸಂಗ್ವಾನ್ ೧೫ನೇ ಸ್ಥಾನದಲ್ಲಿದ್ದು, ಫೈನಲ್ ಪಂದ್ಯಕ್ಕೆ ಅರ್ಹತೆ ಪಡೆಯಲು ಸಾಧ್ಯವಾಗಲಿಲ್ಲ. ೧೦ ಮೀಟರ್ ಮಿಶ್ರ ಏರ್‌ರೈಫಲ್ಸ್ ಶೂಟಿಂಗ್ ಸ್ಪರ್ಧೆಯಲ್ಲಿ ಭಾರತದ ಎರಡೂ ತಂಡಗಳು ಹೊರಬಿದ್ದಿವೆ ಹಾಗೂ ಪುರುಷರ ಹತ್ತು ಮೀಟರ್ ಏರ್ ಪಿಸ್ತೂಲ್ ಸ್ಪರ್ಧೆಯಲ್ಲಿ ಅಗ್ರ ೮ ಸ್ಥಾನ ಪಡೆಯಲಾಗದೇ ಸರಬ್ಜೋತ್ ಸಿಂಗ್ ಮತ್ತು ಅರ್ಜುನ್ ಚೀಮಾ ಕ್ರೀಡಾಕೂಟದಿಂದ ನಿರ್ಗಮಿಸಿದ್ದಾರೆ.

**<><*<><>*><>**

ಶ್ರೀಲಂಕಾದ ಪಲ್ಲೆಕೆಲೆ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಭಾರತ-ಶ್ರೀಲಂಕಾ ನಡುವಿನ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಇತ್ತೀಚಿನ ವರದಿ ಬಂದಾಗ ಭಾರತ ೬.೧ ಓವರ್ ಗಳಲ್ಲಿ ೨ ವಿಕೆಟ್ ನಷ್ಟಕ್ಕೆ ೭೪ ರನ್ ಗಳಿಸಿ ಆಡುತ್ತಿದೆ. ಟಾಸ್ ಗೆದ್ದ ಶ್ರೀಲಂಕಾ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

**<><*<><>*><>**

ದೇಶದ ಹಲವು ರಾಜ್ಯಗಳಲ್ಲಿ ಮುಂದಿನ ಎರಡು ದಿನಗಳ ಕಾಲ ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಮಧ್ಯಪ್ರದೇಶ, ಮಧ್ಯ ಮಹಾರಾಷ್ಟ್ರ, ಹರಿಯಾಣ, ಚತ್ತೀಸ್‌ಗಢ, ವಿದರ್ಭ, ಕೊಂಕಣ, ಗೋವಾ, ಗುಜರಾತ್, ಸೌರಾಷ್ಟ್ರ, ಉತ್ತರಾಖಂಡ, ರಾಜಸ್ತಾನ, ಹಿಮಾಚಲಪ್ರದೇಶ, ಕೇರಳ, ಉತ್ತರ ಪ್ರದೇಶ, ಜಮ್ಮು-ಕಾಶ್ಮೀರ ಮತ್ತಿತರ ಪ್ರದೇಶಗಳಲ್ಲಿ ಬರುವ ಸೋಮವಾರದವರೆಗೆ ಭಾರಿ ಮಳೆಯಾಗುವ ಸಾಧ್ಯತೆ ಇದೆ ಎಂದು ಇಲಾಖೆ ಹೇಳಿದೆ. ಭಾರತದ ಪೂರ್ವ ಮತ್ತು ಈಶಾನ್ಯ ಭಾಗದಲ್ಲಿ, ಸಿಕ್ಕಿಂ, ಜಾರ್ಖಂಡ್, ಒಡಿಶಾದಲ್ಲೂ ನಾಳೆವರೆಗೆ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಕರ್ನಾಟಕ ರಾಜ್ಯದ ಹಲವು ಜಿಲ್ಲೆಗಳಲ್ಲಿ ಧಾರಾಕಾರ ಮಳೆ ಮುಂದುವರಿದಿದೆ. ಕರಾವಳಿ ಭಾಗ, ದಕ್ಷಿಣ ಹಾಗೂ ಉತ್ತರ ಒಳನಾಡಿನ ಜಿಲ್ಲೆಗಳಲ್ಲಿ ನಿರಂತರ ಮಳೆಯಾಗುತ್ತಿರುವ ಕಾರಣ ಕೆಲವೆಡೆ ಪ್ರವಾಹ ಪರಿಸ್ಥಿತಿ ಉಂಟಾಗಿದೆ. ರೈಲು ಮತ್ತು ರಸ್ತೆ ಸಂಚಾರದಲ್ಲೂ ವ್ಯತ್ಯಯವಾಗಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <><*<>**